ಇ) ಮಾಗಡಿ ತಾಲ್ಲೂಕಿನಲ್ಲಿ ಎಷ್ಟು ಗ್ರಾಮಗಳಿಗೆ ಈ ಯೋಜನೆಯನ್ನು ಒದಗಿಸಲಾಗಿದೆ ಮತ್ತು ಎಷ್ಟು ಗ್ರಾಮಗಳಿಗೆ ಒದಗಿಸಲು ಉದ್ದೇಶಿಸಲಾಗಿದೆ ?

ಈ) ಮಾಗಡಿ ತಾಲ್ಲೂಕಿನಲ್ಲಿ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಉ) ಹಾಗಿದ್ದಲ್ಲಿ ಇದನ್ನು ಪರಿಗಣಿಸಲು ಸರ್ಕಾರದ ಕ್ರಮಗಳೇನು ?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):-

ಅ) 5263 (31-3-92 ರವರೆಗೆ)

ಆ) 670 (1992-93)

ಇ) 1) 54

2) 1992 – 93 ರ ಸಾಲಿನಲ್ಲಿ 23 ಗ್ರಾಮಗಳಲ್ಲಿ ಸಣ್ಣ ನೀರು ಸರಬರಾಜು ಯೋಜನೆಯನ್ನು ಒದಗಿಸಲು ಉದ್ದೇಶಿಸಲಾಗಿದೆ.

ಈ) ಹೌದು

ಉ) ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಲಾಗುತ್ತಿದೆ ಮತ್ತು ಆ ಗ್ರಾಮಗಳಲ್ಲಿ ಕುಡಿಯುವ ನೀರು ಸರಬರಾಜನ್ನು ಮುಂದಿನ ಎರಡು ವರ್ಷಗಳಲ್ಲಿ ಉತ್ತಮಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿರುವ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತನೆ

355 (1057): ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿರುವ ತಾಂಡಾಗಳ ಸಂಖ್ಯೆ ಎಷ್ಟು ?

ಆ) ಈ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗುವುದೇ ?

ಇ) ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವಾಗ ಅನುಸರಿಸುವ ಕ್ರಮಗಳೇನು ?

ಈ) ಮಾಗಡಿ ತಾಲ್ಲೂಕಿನಲ್ಲಿ ಎಷ್ಟು ತಾಂಡಾಗಳಿವೆ ಹಾಗೂ ಅವುಗಳನ್ನು ಯಾವಾಗ ಕಂದಾಯ ಗ್ರಾಮಗಳೆಂದು ಪರಿವರ್ತಿಸಲಾಗುವುದು ?

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ) 1,365

ಆ) ಹೌದು.

ಇ) ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ – 3 ರ ಪ್ರಕಾರ ನಿಗದಿಪಡಿಸಿರುವ ಜನಸಂಖ್ಯೆ, ವಿಸ್ತೀರ್ಣ ಕಂದಾಯ ಬಾಕಿ ಆಡಳಿತ ಅನುಕೂಲತೆ, ಇವುಗಳ ಆಧಾರದ ಮೇಲೆ.

ಈ) 3 ತಾಂಡಾಗಳಿವೆ.

ಅರ್ಹವಿರುವ ತಾಂಡಾಗಳನ್ನು ಗ್ರಾಮಗಳನ್ನಾಗಿ 6(ಆರು) ತಿಂಗಳೊಳಗೆ ಪರಿವರ್ತಿಸಲಾಗುವುದು.

ಬೈಲಹೊಂಗಲ ತಾಲ್ಲೂಕುಗಳ ಹೈಕ ದೇವಲಾಪುರ ಗ್ರಾಮದಲ್ಲಿ ಪರಿಶಿಷ್ಟರಿಗೆ ಸ್ಮಶಾನ

357 (858): ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕು ದೇವಲಾಪುರ ಗ್ರಾಮದಲ್ಲಿ ಪರಿಶಿಷ್ಟ ಜನಾಂಗದವರು ಹೂಗಿಯುತ್ತಿದ್ದ ರುದ್ರ ಭೂಮಿಯ ಬಗ್ಗೆ ಕೋರ್ಟಿನಲ್ಲಿ ವ್ಯಾಜ್ಯ ನಡೆದದ್ದರಿಂದ ಆ ಜನರಿಗೆ ಶವ ಸಂಸ್ಕಾರಕ್ಕೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಆ ಪರಿಶಿಷ್ಟ ವರ್ಗ ಮತ್ತು ಪರಿಶಿಷ್ಟ ಜನಾಂಗದವರಿಗೆ ಶವ ಸಂಸ್ಕಾರಕ್ಕೆ 2 ಎಕರೆ ಭೂಮಿಯನ್ನು ಸ್ಮಶಾನಕ್ಕಾಗಿ ಸರ್ಕಾರವು ಮಂಜೂರು ಮಾಡುವುದೇ ?

ಇ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕು ಸೈಕ ಬೈಲವಾಡ ಮತ್ತು ಸವದತ್ತಿ ತಾಲ್ಲೂಕು ಪೈಕಿ ಹಾರುಗೊಪ್ಪದ ಗ್ರಾಮದ ಜನರಿಗೆ ಸ್ಮಶಾನ ಇಲ್ಲದ್ದರಿಂದ ಶವ ಸಂಸ್ಕಾರಕ್ಕೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ಮತ್ತು ಈ ಗ್ರಾಮಗಳ ಜನರಿಗೆ ರುದ್ರ ಭೂಮಿಗಾಗಿ ಜಮೀನು ಮಂಜೂರು ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

ಈ) ಬೆಳಗಾವಿ ಜಿಲ್ಲೆಯಲ್ಲಿ ಶವ ಸಂಸ್ಕಾರಕ್ಕಾಗಿ ರುದ್ರ ಭೂಮಿ ಇಲ್ಲದಿರುವ ಗ್ರಾಮಗಳು ಹಾಗೂ ಸದರಿ ಭೂಮಿಗೆ ರಸ್ತೆ ಸೌಲಭ್ಯವಿಲ್ಲದ ಗ್ರಾಮಗಳಾವುವು (ತಾಲ್ಲೂಕುವಾರು, ಗ್ರಾಮವಾರು ಪ್ರತ್ಯೇಕ ವಿವರ ನೀಡುವುದು)

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):–

ಅ) ಹೌದು

ಆ) ಹೌದು ರುದ್ರ ಭೂಮಿಗಾಗಿ ಭೂ ಸ್ವಾಧೀನಪಡಿಸಿಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಇ) ಹೌದು ರುದ್ರಭೂಮಿಗಳಿಗಾಗಿ ಭೂ ಸ್ವಾಧೀನಪಡಿಸಿಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಈ) ತಾಲ್ಲೂಕುವಾರು, ರುದ್ರ ಭೂಮಿಗಳು ಇಲ್ಲದ ಗ್ರಾಮಗಳ ಸಂಖ್ಯೆ:

ತಾಲ್ಲೂಕುವಾರು	ಗ್ರಾಮಗಳ ಸಂಖ್ಯೆ
ಹುಕ್ಕೇರಿ	78
ಬೈಲಹೊಂಗಲ	86
ಗೋಕಾಕ್	50
ಸೌಂದತ್ತಿ	57
ಚಿಕ್ಕೋಡಿ	29
ರಾಯ್‌ಬಾಗ್	30